# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೋವಿಡ್-19 ಸಾಂಕ್ರಮಿಕ ರೋಗವನ್ನು ತಡೆಗಟ್ಟುವ ಸಂಬಂಧ ರಾಜ್ಯದ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರನ್ನು ವೈದ್ಯಕೀಯ ವಿಮೆ ಅಡಿಯಲ್ಲಿ ಒಳಪಡಿಸುವ ಬಗ್ಗೆ

ಓದಲಾಗಿದೆ: ಕಡತ ಸಂಖ್ಯೆ: ಮುಕಾ/654/201

ಪ್ರಸ್ತಾವನೆ:

ಕೋವಿಡ್-19 ಸಾಂಕ್ರಮಿಕ ರೋಗವನ್ನು ತಡೆಗಟ್ಟುವ ಸಂಬಂಧ ಅಂಗನವಾಡಿ ಕಾರ್ಯಕರ್ತೆಯರು/ ಸಹಾಯಕರು, ಪೊಲೀಸ್ ಅಧಿಕಾರಿಗಳು/ಸಿಬ್ಬಂದಿಗಳು,ಹೋಮ್ ಗಾರ್ಡ್ಸ್, ಪೌರರಕ್ಷಣಾ ದಳ, ಅಗ್ನಿಶಾಮಕ ದಳದ ನೌಕರರು/ಅಧಿಕಾರಿಗಳು,ಬಂದೀಖಾನೆ ಸಿಬ್ಬಂದಿಗಳು, ಪೌರಕಾರ್ಮಿಕರು/ಸ್ಯಾನಿಟೈಸರ್ ಕೆಲಸಗಾರರು/ಅವರಿಗೆ ಸಂಬಂಧಿಸಿದ ವಾಹನಗಳ ಚಾಲಕರು/ಲೋಡರ್ ಗಳು ರವರನ್ನು ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ ಯೋಜನೆಯಂತೆ

1. ಕೋವಿಡ್-19 ರಿಂದ ಮೃತರಾದಲ್ಲಿ
2. ಕೋವಿಡ್-19 ರ ಕಾರ್ಯದಲ್ಲಿ ತೊಡಗಿದ್ದಾಗ ಮೃತರಾದಲ್ಲಿ ರೂ.50.00 ಲಕ್ಷ ಪರಿಹಾರ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾಪಿಸಲಾಗಿದೆ. .

**ಸರ್ಕಾರದ ಆದೇಶ ಸಂಖ್ಯೆ: ಆಇ 114 ವೆಚ್ಚ 11/2020, ದಿನಾಂಕ: 02.05.2020**

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವ ಅಂಶಗಳ ಹಿನ್ನಲೆಯಲ್ಲಿ ಕೋವಿಡ್-19 ಸಾಂಕ್ರಮಿಕ ರೋಗವನ್ನು ತಡೆಗಟ್ಟುವ ಸಂಬಂಧ ಕೆಲಸವನ್ನು ಮಾಡುವಾಗ

ಅ) ಅಂಗನವಾಡಿ ಕಾರ್ಯಕರ್ತೆಯರು/ಸಹಾಯಕರು

ಆ) ಪೊಲೀಸ್ ಅಧಿಕಾರಿಗಳು/ಸಿಬ್ಬಂದಿಗಳು, ಹೋಮ್ ಗಾರ್ಡ್ಸ್‌ಗಳು, ಪೌರರಕ್ಷಣಾ ದಳ, ಅಗ್ನಿಶಾಮಕ ದಳದ ನೌಕರರು/ಅಧಿಕಾರಿಗಳು, ಬಂದೀಖಾನೆ ಸಿಬ್ಬಂದಿಗಳು

ಇ) ಪೌರಕಾರ್ಮಿಕರು/ಸ್ಯಾನಿಟೈಸರ್ ಕೆಲಸಗಾರರು, ಅವರಿಗೆ ಸಂಬಂಧಿಸಿದ ವಾಹನಗಳ ಚಾಲಕರು/ಲೋಡರ್ ಗಳು

ಈ ಮೂರು ವರ್ಗಗಳಿಗೆ ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ ಯೋಜನೆಯ ಮಾರ್ಗಸೂಚಿಗಳಂತೆ ಕೋವಿಡ್ ಕೆಲಸದಲ್ಲಿ ಪಾಲ್ಗೊಂಡಿದ್ದು ಕೋವಿಡ್-19 ರೋಗದಿಂದ ಮೃತರಾದಲ್ಲಿ ಈ ಕೆಲಸದಲ್ಲಿರುವವರಿಗೆ ಮನೋಸ್ಥೈರ್ಯ ಹೆಚ್ಚಿಸಲು ರೂ.30.00 ಲಕ್ಷ ಪರಿಹಾರ ಒದಗಿಸಲು ಸರ್ಕಾರವು ಮಂಜೂರಾತಿ ನೀಡಿ ಆದೇಶಿಸಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,**

Ekroop Caur

**(ಡಾ. ಏಕರೂಪ್ ಕೌರ್)**

**ಸರ್ಕಾರದ ಕಾರ್ಯದರ್ಶಿ (ಆ ಮತ್ತು ಸಂ)**

**ಆರ್ಥಿಕ ಇಲಾಖೆ**

**ಇವರಿಗೆ:**

1. ಮಹಾಲೇಖಪಾಲರು ,ಕರ್ನಾಟಕ , ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ,ಬೆಂಗಳೂರು
3. ಸರ್ಕಾರದ ಎಲ್ಲಾ ಅಪರ ಮುಖ್ಯಕಾರ್ಯದರ್ಶಿಗಳು.
4. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
5. ಸರ್ಕಾರದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್
6. ಸರ್ಕಾರದ ಎಲ್ಲಾ ಇಲಾಖಾ ಮುಖ್ಯಸ್ಥರುಗಳು
7. ಶಾಖಾ ರಕ್ಷಕಡತ/ಹೆಚ್ಚುವರಿ ಪ್ರತಿಗಳು